# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 21, ಹೆಬ್ಬಾಳ, ಬೆಂಗಳೂರು.**

**ದಿನಾಂಕ:15-02-2021.**

**ಸಂಖ್ಯೆ: ಸ.ಅ/ವಾ-21/ಪಿ.ಆರ್/09/2020-21**

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/20-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ:08-02-2021 ರಂದು 12.00 ಗಂಟೆಗೆ ವಾರ್ಡ್ ನಂ:21 ಹೆಬ್ಬಾಳ ವಾರ್ಡ್ ವ್ಯಾಪ್ತಿಯಲ್ಲಿನ ಕ್ಷೇಮಾಭಿವೃದ್ಧಿ ಸಂಘ (ರಿ) ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

### "ಸಭೆಗೆ ಹಾಜರಾಗಿದ್ದವರ ವಿವರಗಳು"

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 01 | ಎಂ.ವೆಂಕಟಾಚಲಪತಿ ಜಂಟಿ ಆಯುಕ್ತರು (ಕಂದಾಯ) | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 02 | ಮುಕೇಶ್ ಎಸ್ ಬಿರಾದಾರ್ (ಎ.ಇ) | ಸದಸ್ಯ ಕಾರ್ಯದರ್ಶಿ ವಾರ್ಡ್ ನಂ: 21 |
| 03 | ಮಂಜುನಾಥ್ (ಎ.ಇ.ಇ) | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) |
| 04 | ರಾಧ. ಈ | ಕಿರಿಯ ಅಭಿಯಂತರರು, ಬೆಸ್ಕಾಂ |
| 05 | ಲಝುರ್ ಆರ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಸದಸ್ಯರು |
| 06 | ರಾಮಣ್ಣ. ಎನ್ | ತೆರಿಗೆ ನೀರಿಕ್ಷಕರು ವಾರ್ಡ್-21 |
| 07 | ಎನ್. ಪ್ರಕಾಶ್ | ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, |
| 08 | ವೀರಶೇಖರ | ಸ್ಥಳೀಯ ನಿವಾಸಿಗಳ |
| 09 | ವೀರಶೆಟ್ಟಿ | ಸ್ಥಳೀಯ ನಿವಾಸಿಗಳ |
| 10 | ಆನಂದ್ ಕುಮಾರ್ | ಕಿರಿಯ ಅಭಿಯಂತರರು |
| 11 | ಶ್ರೀಮತಿ ರಾಣಿ | ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ.ಎಂ.ವೆಂಕಟಾಚಪತಿ ಮತ್ತು ಕಾರ್ಯದರ್ಶಿಗಳಾದ ಶ್ರೀ ಮುಕೇಶ್. ಎಸ್. ಬಿರಾದರ್ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ನಂ:21 ರವರು ಸ್ವಯಂ ಪರಿಚಯ ಮಾಡಿಕೊಂಡು ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ, ರಸ್ತೆ ಗುಂಡಿ ಮುಚ್ಚುವ ಬಗ್ಗೆ, ಬೀದಿ ದೀಪಗಳ ನಿರ್ವಹಣೆ ಬಗ್ಗೆ ಸಾರ್ವಜನಿಕರುಗಳ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಾರ್ವಜನಿಕರಿಗೆ ತಿಳಿಯಪಡಿಸಿದರು.

- ದಿನಾಂಕ : 08-02-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

- **ಘನತ್ಯಾಜ್ಯ ನಿರ್ವಹಣೆ ಕೋಶದ ಅಧಿಕಾರಿಗಳಿಗೆ:**

  1. ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿದಿನ ತ್ಯಾಜ್ಯ ವಿಲೇವಾರಿ ಮಾಡಲು ಆಟೋ ಟಿಪ್ಪರ್ ವಾಹನವನ್ನು ಒದಗಿಸುವಂತೆ ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಹೆಬ್ಬಾಳ ವಿಭಾಗ ರವರಿಗೆ ಸೂಚಿಸಲಾಯಿತು.
  2. ವಾರ್ಡ್‌ನ ಬ್ಲಾಕ್‌ಸ್ಪಾಟ್‌ಗಳಲ್ಲು ಸ್ವಚ್ಛಗೊಳಿಸಲು ಸಂಬಂಧಪಟ್ಟ ಘನತ್ಯಾಜ್ಯ ನಿರ್ವಹಣ ಸಹಾಯಕ ಕಾರ್ಯಪಾಲಕ ಅಭಿಯಂತರರು/ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಅಗತ್ಯಾ ಕ್ರಮ ವಹಿಸಲು ಸೂಚಿಸಲಾಯಿತು.
  3. ವಾರ್ಡ್ ವ್ಯಾಪ್ತಿಯಲ್ಲಿ ಈಗಾಗಲೆ ಒಬ್ಬರು ಮಾರ್ಷಲ್ ಅನ್ನು ನೇಮಿಸಿದ್ದು ಅವರಿಂದ ವಾರ್ಡ್ ನಲ್ಲಿ ಶೇಖರಣೆಗೊಳ್ಳುವ ಎಲ್ಲಾ ಪ್ರದೇಶಗಳಲ್ಲು ದಂಡ ವಿದಿಸಲು ಹಾಗೂ ತ್ಯಾಜ್ಯ ಶೇಖರಣೆಗೊಳ್ಳುವುದನ್ನು ತೆಯಲು ಸಾಧ್ಯವಾಗುತ್ತಿಲ್ಲ ಅದ್ದರಿಂದ ವಾರ್ಡ್ ವ್ಯಾಪ್ತಿಗೆ

ಹೆಚ್ಚುವರಿಯಾಗಿ ಒಬ್ಬ ಮಾರ್ಷಲ್ ಅನ್ನು ನೇಮಿಸಲು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಹೆಬ್ಬಾಳ ವಿಭಾಗ ರವರಿಗೆ ಸೂಚಿಸಲಾಯಿತು.

4. ವಾರ್ಡ್ ವ್ಯಾಪ್ತಿಯಲ್ಲಿ ಮನೆ ಮನೆಯಿಂದ ಕಸ ಸಂಗ್ರಹಣೆ ಮತ್ತು ಸಾಗಣಿಕೆ ಮಾಡುತ್ತಿರುವ ಆಟೋ ಟಿಪ್ಪರ್ ವಾಹನಗಳಿಗೆ ಮೈಕ್ ಅಳವಡಿಸುವಂತೆ ಸಂಬಂಧಪಟ್ಟ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

- **ಬಿಡಬ್ಲ್ಯೂಎಸ್ಎಸ್‌ಬಿ ರವರಿಗೆ:**

  1. ವಾರ್ಡ್ ವ್ಯಾಪ್ತಿಯಲ್ಲಿ ಎಸ್.ಬಿ.ಎಂ ಲೇಔಟ್ ಆನಂದನಗರ ಹಾಗೂ ವೇಣುಗೋಪಾಲ ಲೇಔಟ್ ಗಳಲ್ಲಿ ವೇಳ ಪಟ್ಟಿಯಂತೆ ಸರಿಯಾದ ಸಮಯಕ್ಕೆ ಕುಡಿಯುವ ನೀರಿನ ವ್ಯವಸ್ಥೆ ಮಾಡುವಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯ ಅಧಿಕಾರಿಗಳಿಗೆ ಹಲವು ಬಾರಿ ತಿಳಿಸಿದರು ಸಹ ಬಗೆಹರಿಸದ ಕಾರಣ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ದಿನಾಂಕ:-16-02-2021 ರಂದು ನೋಟೀಸ್ ನೀಡಲಾಗಿದೆ.

- **ಕಾಮಗಾರಿ ಇಲಾಖೆಗೆ.**

  1. 5ನೇ ಕ್ರಾಸ್, 1ನೇ ಎ ಕ್ರಾಸ್, 2ನೇ ಮೇನ್ 2ನೇ ಕ್ರಾಸ್ ಎಂ.ಎಸ್.ಹೆಚ್ ಲೇಔಟ್ ಗಳಲ್ಲಿ ಪಾಟ್‌ಹೋಲ್ಸ್ ಮತ್ತು ರಸ್ತೆ ಅಗೆತ ಮಾಡಿರುವುದರಿಂದ ಸದರಿ ಸ್ಥಳದಲ್ಲಿ ಸಂಚಾರಕ್ಕೆ ಅಡಚಣೆಯಾಗಿರುವುದನ್ನು ಈ ಕೂಡಲೇ ದುರಸ್ಥಿಗೊಳಿಸಲು ಅಗತ್ಯ ಕ್ರಮವಹಿಸುವಂತೆ ಸಹಾಯಕ ಅಭಿಯಂತರರು ವಾರ್ಡ್ 21 ರವರಿಗೆ ಸೂಚಿಸಲಾಯಿತು.
  2. ಆನಂದನಗರ 1ನೇ ಎ ಮತ್ತು ಬಿ ಕ್ರಾಸ್ ಗಳಲ್ಲಿ ಕವರಿಂಗ್ ಸ್ಲಾಬ್ ಅಳವಡಿಸಲು ಕಾಮಗಾರಿ ಇಲಾಖೆಗೆ ಸೂಚಿಸಲಾಯಿತು.
  3. ಆನಂದನಗರ 1ನೇ ಮುಖ್ಯ ರಸ್ತೆಯಲ್ಲಿ ಪಾದಚಾರಿಗಳ ಮಾರ್ಗವನ್ನು ದುರಸ್ಥಿ ಪಡಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

- ವಿದ್ಯುತ್ ವಿಭಾಗ.

  1. ವಾರ್ಡ್ ವ್ಯಾಪ್ತಿಯಲ್ಲಿ ಆನಂದನಗರ ಬೀದಿ ದೀಪಗಳನ್ನು ದುರಸ್ಥಿಯಲ್ಲಿರುವುದನ್ನು ಈ ಕೂಡಲೇ ಸರಿಪಡಿಸುವಂತೆ ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುದೀರ್ಘವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 21, ಹೆಬ್ಬಾಳ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 21, ಹೆಬ್ಬಾಳ

ಪ್ರತಿಯನ್ನು:-

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು(ಪೂರ್ವ)ಬಿಬಿಎಂಪಿರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
6. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
9. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.